ಕೆ.ಎಸ್.ಆರ್.ಟಿ.ಸಿ. ಬಸ್‌ಗಳಲ್ಲಿ ಹಿರಿಯ ನಾಗರಿಕರಿಗೆ ರಿಯಾಯಿತಿ ದರದ ಸೌಲಭ್ಯ

447 (390) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಹಿರಿಯ ನಾಗರೀಕರಿಗೆ ಬಸ್ ದರದಲ್ಲಿ ರಿಯಾಯಿತಿ ನೀಡಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ, ಯಾವ ದರದಲ್ಲಿ ಶೇಕಡಾ ಎಷ್ಟು ರಿಯಾಯಿತಿ ನೀಡಲಾಗುತ್ತಿದೆ ಹಾಗೂ ಈ ಸೌಲಭ್ಯವನ್ನು ಪಡೆಯಲು ವಿಧಿಸಿರುವ ಮಾನದಂಡವೇನು;

ಇ) ಈ ಸೌಲಭ್ಯ ಯಾವಾಗ ಜಾರಿಗೆ ಬಂತು ಹಾಗೂ ಅಲ್ಲಿಂದ ಇಲ್ಲಿಯವರೆಗೆ ಎಷ್ಟು ಜನ ಹಿರಿಯ ನಾಗರಿಕರು ಇದರ ಪ್ರಯೋಜನ ಪಡೆದಿದ್ದಾರೆ;

ಈ) 65 ವರ್ಷಕ್ಕೆ ಮೇಲ್ಪಟ್ಟವರು ಈ ಸೌಲಭ್ಯವನ್ನು ಅನಾರೋಗ್ಯ ಇತ್ಯಾದಿ ಕಾರಣಗಳಿಂದ ಸದುಪಯೋಗ ಪಡೆಸಿಕೊಳ್ಳಲು ಸಾಧ್ಯವಿಲ್ಲ ವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) 60 ವರ್ಷಕ್ಕೆ ಮೇಲ್ಪಟ್ಟವರಿಗೂ ಈ ರಿಯಾಯಿತಿ ದರದ ಸೌಲಭ್ಯವನ್ನು ಒದಗಿಸಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು) :

ಅ) ಹೌದು.

ಆ) ಶೇಕಡಾ:25.

65 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ವಯಸ್ಸಿನವರಿಗೆ ಬಸ್ ಪ್ರಯಾಣ ದರದಲ್ಲಿ ಶೇಕಡ 25ರಷ್ಟು ರಿಯಾಯಿತಿ ನೀಡಲಾಗುತ್ತಿದೆ. 65 ವರ್ಷ ಮತ್ತು ಅದಕ್ಕೂ ಹೆಚ್ಚಿನ ವಯಸ್ಸಿನ ಪ್ರಯಾಣಿಕರು ಈ ಸೌಲಭ್ಯವನ್ನು ಪಡೆದುಕೊಳ್ಳಲು ಹಿರಿಯ ನಾಗರೀಕರು ಮತ್ತು ಅಂಗವಿಕಲರ ಕಲ್ಯಾಣ ನಿರ್ದೇಶನಾಲಯದವರು ವಿತರಿಸುವ ಭಾವ ಚಿತ್ರವಿರುವ ಗುರುತಿನ ಚೀಟಿ, ಚಾಲನಾ ಪರವಾನಗಿ (ಡ್ರೈವಿಂಗ್ ಲೈಸೆನ್ಸ್), ರಾಜ್ಯ ಚುನಾವಣಾ ಆಯೋಗದವರು ವಿತರಿಸಿರುವ ಗುರುತಿನ ಚೀಟಿ (ವೋಟರ್ಸ್ ಐ.ಡಿ.), ಪಾಸ್ ಪೋರ್ಟ್, ಪಾನ್ ಕಾರ್ಡ್ ಅಥವಾ ನಿಗಮವು ವಿತರಿಸುತ್ತಿರುವ

ಭಾವಚಿತ್ರವಿರುವ ಗುರುತಿನ ಚೀಟಿ ಇವುಗಳ ಪೈಕಿ ಯಾವುದಾದರೂ ಒಂದನ್ನು ತೋರಿಸಿ ಬಸ್ ಪ್ರಯಾಣ ದರದಲ್ಲಿ ರಿಯಾಯಿತಿ ಪಡೆಯ ಬಹುದಾಗಿದೆ.

ಇ) ದಿನಾಂಕ: 8.9.2008 ರಿಂದ ಪ್ರಯೋಜನ ಪಡೆದವರು: 1,62,70,410.

ಈ) ಇಲ್ಲ.

ಉ) ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

451 (775) ಶ್ರೀ ರುದ್ರೇಶ ಗೌಡ ವೈ.ಎನ್. (ಬೇಲೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ತಾಲ್ಲೂಕು ಅರೇಹಳ್ಳಿ ಗ್ರಾಮದ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲಾಗುವುದೇಯೇ?

ಆ) ಮೇಲ್ದರ್ಜೆಗೆ ಏರಿಸಲಾಗದಿದ್ದರೆ ಸಿಬ್ಬಂದಿ ವೈದ್ಯರ ನೇಮಕ ಹಾಗೂ ಕಟ್ಟಡ ನಿರ್ಮಾಣ ಇದುವರೆವಿಗೂ ಆಗಿಲ್ಲವೆಂಬುವುದು ನಿಜವೇ;

ಇ) ಇದಕ್ಕೆ ಏನು ಕಾರಣ ಸರ್ಕಾರ ಈ ಬಗ್ಗೆ ಏನು ಕ್ರಮ ತೆಗೆದುಕೊಳ್ಳುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬೇಲೂರು ತಾಲ್ಲೂಕು ಅರೇಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ದಿನಾಂಕ: 15/05/2007 ರ ಆದೇಶದಲ್ಲಿ ಮೇಲ್ದರ್ಜೆಗೇರಿಸಲಾಗಿದೆ.

ಆ) ಸದರಿ ಆಸ್ಪತ್ರೆಯು ಪ್ರಸ್ತುತ ಪ್ರಾಥಮಿಕ ಆರೋಗ್ಯ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿದೆ. ಮೇಲ್ದರ್ಜೆಗೇರಿಸುವುದಕ್ಕೆ ಅನುಗುಣವಾಗಿ ಕಟ್ಟಡ ನಿರ್ಮಾಣ ಕೈಗೊಳ್ಳಲು ಇದುವರೆಗೆ ಸಾಧ್ಯವಾಗಿಲ್ಲ. ಆದುದರಿಂದ, ಸಿಬ್ಬಂದಿ ಮತ್ತು ವೈದ್ಯರ ನೇಮಕ ಇತ್ಯಾದಿ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಸ್ತುತ, 179 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಆ ಪೈಕಿ 125 ಸಮುದಾಯ ಆರೋಗ್ಯ